# ಕರ್ನಾಟಕ ಸರ್ಕಾರ

**ಆಯುಕ್ತರ ಕಚೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕೇಂದ್ರೀಕೃತ ದಾಖಲಾತಿ ಘಟಕ, ಸೆಂಟ್ರಲ್ ಜೂನಿಯರ್ ಕಾಲೇಜು ಆವರಣ, ಕೆಂಪೇಗೌಡ ರಸ್ತೆ, ಬೆಂಗಳೂರು-560009**

**Phone: 22228805, 22483140, 22483145** **e-mail :- cackarnataka1@gmail.com**


ಸಂಖ್ಯೆ:ಸಿಎಸಿ-05/ಬಿ.ಇಡಿ.ದಾ./01/2021-22 ದಿನಾಂಕ:03-12-2022

## ಪ್ರಕಟಣೆ

2022-23ನೇ ಸಾಲಿಗೆ ಎರಡು ವರ್ಷದ ಬಿ.ಇಡಿ ಕೋರ್ಸಿನ ವ್ಯಾಸಂಗಕ್ಕಾಗಿ ರಾಜ್ಯದ ಸರ್ಕಾರಿ, ಮಾನ್ಯತೆ ಪಡೆದ ಅನುದಾನಿತ ಹಾಗೂ ಅನುದಾನರಹಿತ ಬಿ.ಇಡಿ ಕಾಲೇಜುಗಳಲ್ಲಿನ ಸರ್ಕಾರಿ ಕೋಟಾದ ಸೀಟುಗಳ ದಾಖಲಾತಿಗೆ ಸಂಬಂಧಿಸಿದಂತೆ ಕಾಲೇಜು ಸಹಿತ ಸೀಟು ಹಂಚಿಕೆಯ ಆಯ್ಕೆಪಟ್ಟಿಯನ್ನು ದಿನಾಂಕ: 03-12-2022 ರಂದು, ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದಾಗಿ ಅಧಿಸೂಚನೆಯಲ್ಲಿ ತಿಳಿಸಲಾಗಿತ್ತು.

ಮಾನ್ಯ ಸರ್ಕಾರದ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯದಿಂದ ಹೊರಡಿಸಲಾದ ಅಧಿಸೂಚನೆ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸುತ್ತೋಲೆ ಉಲ್ಲೇಖ-3ರಂತೆ **ದಿನಾಂಕ:01-11-2022 ರಿಂದ ಅನ್ವಯವಾಗುವಂತೆ ಶೈಕ್ಷಣಿಕ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳ ಪ್ರವೇಶ ಪ್ರಕ್ರಿಯೆಯಲ್ಲಿ ಪರಿಶಿಷ್ಟ ಜಾತಿಗೆ ಶೇ.17% ಮತ್ತು ಪರಿಶಿಷ್ಟ ಪಂಗಡಕ್ಕೆ ಶೇ.7% ರಂತೆ ಮೀಸಲಾತಿ ಪ್ರಮಾಣವನ್ನು** ಅನುಷ್ಠಾನಗೊಳಿಸಲು ಪ್ರತಿ ಶೈಕ್ಷಣಿಕ ಸಂಸ್ಥೆಯಲ್ಲಿ ಪ್ರವರ್ಗವಾರು ಸೀಟು ಹಂಚಲು ರೋಸ್ಟರ್‌ಪಟ್ಟಿಯನ್ನು ನಿಗದಿಪಡಿಸಿ, ಸೀಟು ಹಂಚುವ ಸಂಬಂಧ ಮಾನ್ಯ ಸರ್ಕಾರಕ್ಕೆ ಮಾರ್ಗದರ್ಶನವನ್ನು ಕೋರಲಾಗಿದೆ.

ಈ ಹಿನ್ನೆಲೆಯಲ್ಲಿ ಅಧಿಸೂಚನೆಯಂತೆ ದಿನಾಂಕ:03-12-2022 ರಂದು ಪ್ರಕಟಿಸಬೇಕಿದ್ದ ಆಯ್ಕೆಪಟ್ಟಿಯನ್ನು ಮತ್ತು ದಾಖಲಾತಿಗೆ ಸಂಬಂಧಿಸಿದ ಮುಂದಿನ ಪ್ರಕ್ರಿಯೆಗಳನ್ನು ತಾತ್ಕಾಲಿಕವಾಗಿ ಮುಂದೂಡಲಾಗಿದೆ. ಅಧಿಸೂಚನೆಯಲ್ಲಿ ತಿಳಿಸಿರುವ ವೇಳಾಪಟ್ಟಿಯಲ್ಲಿ ವ್ಯತ್ಯಾಸವಾಗಲಿದ್ದು, ಈ ಸಂಬಂಧ ವೇಳಾಪಟ್ಟಿಯನ್ನು ಮುಂದಿನ ದಿನಗಳಲ್ಲಿ ಇಲಾಖಾ ವೆಬ್‌ಸೈಟ್ https://schooleducation.kar.nic.in ನಲ್ಲಿ ಪ್ರಕಟಿಸಲಾಗುವುದು, ಅಭ್ಯರ್ಥಿಗಳು ಈ ಬಗ್ಗೆ ಸಹಕರಿಸಲು ತಿಳಿಸಿದೆ.

ಸಹಿ/-
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ